# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರವರ ಕಛೇರಿ, ಕೆಂಪೇಗೌಡನಗರ ಉಪವಿಭಾಗ

ಚಿಕ್ಕಪೇಟೆ ವಿಭಾಗ, ಬೆಂಗಳೂರು.

ಸ.ಕಾ.ನಿ.ಅ(ಕೆ.ಗೌ.ನ)ಪಿ.ಆರ್/ 401 /2020-21, ದಿನಾಂಕ : 25-2-2021.

ಮಾನ್ಯ ಆಯುಕ್ತರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಕಛೇರಿ ಆದೇಶ ಸಂಖ್ಯೆ: ಬಿ12(5)ಪಿ.ಆರ್/35/2020-21, ದಿನಾಂಕ:29-09-2020 ಹಾಗೂ ನೋಡಲ್ ಅಧಿಕಾರಿ ರವರು ದಿನಾಂಕ: 20-02-2021 ರಂದು ಈ ಉಪವಿಭಾಗದ ವಾರ್ಡ್ ಸಂಖ್ಯೆ: 143 ವಾರ್ಡ್ ಕಛೇರಿಯಲ್ಲಿ ಸಭೆಯನ್ನು ಏರ್ಪಡಿಸಲಾಗಿ. ಸಭೆಯ ನಡಾವಳಿಗಳು ಈ ಕೆಳಕಂಡಂತಿರುತ್ತದೆ.

**ಉಪಸ್ಥಿತರು:**

| ಕ್ರ ಸಂ. | ಹೆಸರು | ಹುದ್ದೆ | ಮೊಬೈಲ್ ಸಂಖ್ಯೆ |
|---|---|---|---|
| 1 | ಶ್ರೀ. ಉಮಾಶಂಕರ್ | ನೋಡಲ್ ಅಧಿಕಾರಿಗಳು ಹಾಗೂ ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ) | 9480684418 |
| 2 | ಶ್ರೀ. ಬೆನಕೇಶ್ ಆರ್ | ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು 143 | 9480684415 |
| 3 | ಶ್ರೀ.ಎಸ್.ಹೇಮಂತ್ ಕುಮಾರ್ | ಸಹಾಯಕ ಅಭಿಯಂತರರು ಬೆಸ್ಕಾಂ | 9449870535 |
| 4 | ಶ್ರೀಹನಮಂತ ವನಚೋಳ್ (ಜ.ಮಾ.ಓ) | ಜಲ ಪರಿವೀಕ್ಷಕರು (BWSSB) | 9845444087 |
| 5 | ಶ್ರೀ.ಪಿ.ನರಸಿಂಹ | ಕಿರಿಯ ಆರೋಗ್ಯ ಪರಿವೀಕ್ಷಕರು | 8660658637 |
| 6 | ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 8217636732 |
| 7 | ಶ್ರೀ.ರಾಮ ಐಯಂಗಾರ್ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9901066586 |
| 8 | ಎಂ.ಎಂ.ವಿ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448387878 |
| 9 | ಚಿಕ್ಕಣ್ಣ ಗಾರ್ಡನ್ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448508638 |

ದಿನಾಂಕ:20-02-2021 ರಂದು ನಡೆದ ವಾರ್ಡ್ -143ರ ಸಮಿತಿ ಸಭೆಯ ನಡಾವಳಿಗಳು:

ಮಾನ್ಯ ನೋಡಲ್ ಅಧಿಕಾರಿಗಳು ರವರ ಅನುಮತಿಯೊಂದಿಗೆ ವಾರ್ಡ್ ಸಮಿತಿಯ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು ಸಭೆಯಲ್ಲಿ ಹಾಜರಿದ್ದ, ರೆಸಿಡೆಂಟ್ಸ್ ವೆಲ್‌ಫೇರ್

Scanned by CamScanner

ಅಸೋಸಿಯೇಷನ್‌ಗಳ ಅಧ್ಯಕ್ಷರು ಮತ್ತು ವಿವಿಧ ಇಲಾಖೆಯ ಅಧಿಕಾರಿಗಳನ್ನು ಸ್ವಾಗತಿಸುವ ಮೂಲಕ ಸಮಿತಿ ಸಭೆಯನ್ನು ಪ್ರಾರಂಭಿಸಲಾಯಿತು.

ಮೊದಲು ಬಸನವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ನ ಶ್ರೀ.ರಾಜು ರವರು ಮಾತನಾಡಿ, ಎಂ.ಎನ್.ಕೃಷ್ಣರಾವ್ ರಸ್ತೆಯಲ್ಲಿ ರಾತ್ರಿ ವೇಳೆಯಲ್ಲಿ ಡಾಂಬರೀಕರಣ ಕಾಮಗಾರಿಯನ್ನು ಮಾಡಿದ್ದು, ಇದರ ಗುಣ ಮಟ್ಟದ ಬಗ್ಗೆ ಖಾತ್ರಿ ಪಡಿಸುವ ದಾಖಲಾತಿಗಳನ್ನು ಒದಗಿಸುವಂತೆ ಕೋರಿದರು. ಈ ಬಗ್ಗೆ ಚರ್ಚಿಸಲಾಗಿ ಸದರಿ ಕಾಮಗಾರಿಯನ್ನು BBMP Road Infrastructure ವಿಭಾಗದಿಂದ ನಿರ್ವಹಿಸಲಾಗಿದ್ದು ಕಾಮಗಾರಿಯ ಗುಣಮಟ್ಟದ ಬಗ್ಗೆ ದಾಖಲಾತಿಗಳನ್ನು ಒದಗಿಸಲು ಅವರಿಗೆ ತಿಳಿಸಲಾಗುವುದೆಂದು ನೋಡಲ್ ಅಧಿಕಾರಿಗಳು ಸಭೆಗೆ ತಿಳಿಸಿದರು.

ಬಸನವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ನ ಶ್ರೀ.ರಾಜು ರವರು ಮಾತನಾಡಿ ಶ್ರೀರಾಮಮಂದಿರ ರಸ್ತೆಯ ಕನ್ಸರ್‌ವೆನ್ಸಿಯಲ್ಲಿ ಹಸುಗಳ ಶೆಡ್‌ಅನ್ನು ತೆರವುಗೊಳಿಸಲು ಈ ಹಿಂದಿನ ಸಭೆಯಲ್ಲಿ ಕೋರಿರುವುದನ್ನು ಪುನಃ ಪ್ರಸ್ತಾಪಿಸಿದರು ಈ ಬಗ್ಗೆ ಚರ್ಚಿಸಲಾಗಿ ಸದರಿ ವಿಚಾರವಾಗಿ ಸೂಕ್ತ ಕ್ರಮ ವಹಿಸಲು ಬಿಬಿಎಂಪಿ ಪಶು ಸಂಗೋಪನಾ ವಿಭಾಗಕ್ಕೆ ಈ ಹಿಂದೆಯೇ ತಿಳಿಸಲಾಗಿದ್ದು, ಮತ್ತೊಮ್ಮೆ ಕೂಡಲೇ ಕ್ರಮ ವಹಿಸಲು ಕೋರಲಾಗಿವುದೆಂದು ನೋಡಲ್ ಅಧಿಕಾರಿಗಳು ಸಭೆಗೆ ತಿಳಿಸಿದರು.

ನಂತರ ಸಭೆಯು ನಡೆಯುತ್ತಿರುವಾಗಲೇ ಎಂ.ಎಂ.ವಿ. ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ನ ಶ್ರೀ. ವೆಂಕಟೇಶ್ ರವರು ದೂರವಾಣಿ ಮುಖಾಂತರ ಮಾತನಾಡಿ ವಾಸವಿ ದೇವಸ್ಥಾನದ ರಸ್ತೆ ಹಾಗೂ ನ್ಯಾಷನಲ್ ಹೈಸ್ಕೂಲ್ ರಸ್ತೆಗಳು ಸೇರುವ ಪಾದಚಾರಿ ಮಾರ್ಗದಲ್ಲಿ ಬಟ್ಟೆ ವ್ಯಾಪಾರ ಮಾಡುತ್ತಿರುವುದನ್ನು ಹಿಂದಿನ ಸಭೆಯಲ್ಲಿ ತೆರವುಗೊಳಿಸಲು ಕೋರಿದ್ದ ಮೇರೆಗೆ ತೆರವುಗೊಳಿಸಿರುವುದಕ್ಕೆ ಧನ್ಯವಾದಗಳನ್ನು ದಾಖಲಿಸಲು ಕೋರಿದರು. ಈ ಬಗ್ಗೆ ಸಭೆಯ ಗಮನಕ್ಕೆ ತರಲಾಯಿತು.

ನಂತರ ಬಸನವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ನ ಶ್ರೀ.ರಾಜು ರವರು ಮಾತನಾಡಿ, ಕೆ.ಆರ್. ರಸ್ತೆ ಪಾದಚಾರಿ ಮಾರ್ಗದಲ್ಲಿ ಹೂವಿನ ಕುಂಡಗಳನ್ನು ಮಾರುವ ಅಂಗಡಿಯನ್ನು ತೆರವುಗೊಳಿಸಲು ಕೋರಿದರು. ಈ ಬಗ್ಗೆ ಸೂಕ್ತ ಕ್ರಮವಹಿಸಲು ಸಭೆಯಲ್ಲಿ ಹಾಜರಿದ್ದ ಕಿರಿಯ ಆರೋಗ್ಯ ಪರಿವೀಕ್ಷಕರು ಮತ್ತು ವಾರ್ಡ್‌ನ ಅಭಿಯಂತರರಿಗೆ ನೋಡಲ್ ಅಧಿಕಾರಿಗಳು ತಿಳಿಸಿದರು.

ನಂತರ ಪುನಃ ಶ್ರೀ. ರಾಜುರವರು ಮಾತನಾಡಿ ಹೆಚ್.ಬಿ. ಸಮಾಜ ರಸ್ತೆ ಕನ್ಸರ್‌ವೆನ್ಸಿ (ನಿಡುಮಾಮಿಡಿ ಮಠ ಮುಂಭಾಗ) ಯಲ್ಲಿ ಕಾಂಕ್ರೀಟ್ ಒಡೆದು ಹೋಗಿ ಗುಂಡಿಯಾಗಿರುವುದನ್ನು ಸರಿಪಡಿಸಲು ಕೋರಿ ಸಲ್ಲಿಸಲಾಗಿದ್ದ ದೂರಿಗೆ ಸ್ಪಂದಿಸಿ ತ್ವರಿತವಾಗಿ ಕ್ರಮಕೈಗೊಂಡು ಸರಿಪಡಿಸಿರುವುದಕ್ಕೆ ಧನ್ಯವಾದಗಳನ್ನು ತಿಳಿಸಿದರು.

ನಂತರ ಕಾರ್ಯದರ್ಶಿಗಳ ವಂದನಾರ್ಪಣೆಯೊಂದಿಗೆ ವಾರ್ಡ್ ಸಮಿತಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

25/2/2021

ಕಾರ್ಯದರ್ಶಿಗಳು ಹಾಗೂ
ಸಹಾಯಕ ಅಭಿಯಂತರರು
ವಾರ್ಡ್ -143 ವಿ. ವಿ.ಪುರಂ

25/2/2021

ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 143 ಹಾಗೂ
ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ)

Scanned by CamScanner